ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ ದಿನಾಂಕ : DATE : 24/07/2019

# 2ನೇ ಸಲವೂ ಎಚ್‌ಡಿಕೆ ಅಪೂರ್ಣ ಮುಖ್ಯಮಂತ್ರಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಎಚ್.ಡಿ.ಕುಮಾರಸ್ವಾಮಿ ಅವರು ಎರಡನೇ ಬಾರಿಯೂ ಅವಧಿಗೆ ಮೊದಲೇ ಮುಖ್ಯಮಂತ್ರಿ ಹುದ್ದೆಯನ್ನು ತೊರೆಯಬೇಕಾಗಿ ಬಂದಿದೆ.

ಹಿಂದೆ 2006ರ ಫೆ.4ರಂದು ಜೆಡಿಎಸ್ ಮತ್ತು ಬಿಜೆಪಿ ನೇತೃತ್ವದ ಸರ್ಕಾರದ ಸಮ್ಮಿಶ್ರ ಸರ್ಕಾರ ರಚಿಸಿ ಮುಖ್ಯಮಂತ್ರಿಯಾಗಿದ್ದ ಕುಮಾರಸ್ವಾಮಿ ಅವರು ಒಪ್ಪಂದದಂತೆ 20 ತಿಂಗಳ ಅಧಿಕಾರಾವಧಿನಂತರ ಕುರ್ಚಿಯಿಂದ ಕೆಳಗಿಳಿಯಬೇಕಾಯಿತು. ಹೀಗಾಗಿ, ಅವರು ಮುಖ್ಯಮಂತ್ರಿ ಹುದ್ದೆಯ ಐದು ವರ್ಷಗಳ ಅವಧಿ ಪೂರೈಸಲು ಆಗಲಿಲ್ಲ.

ನಂತರ ಬಿಜೆಪಿಗೆ ನೀಡಿದ ವಾಗ್ದಾನದಂತೆ ಬಿಜೆಪಿಗೆ ಅಧಿಕಾರ ಬಿಟ್ಟುಕೊಟ್ಟರೂ ಬೆಂಬಲ ನೀಡಲಿಲ್ಲ. ಪರಿಣಾಮ ಯಡಿಯೂರಪ್ಪ ಅವರು ಮೊದಲ ಬಾರಿಗೆ ಮುಖ್ಯಮಂತ್ರಿಯಾದರೂ ಒಂದು ವಾರದಲ್ಲೇ ಬಹುಮತ ಸಾಬೀತುಪಡಿಸಲು ಸಾಧ್ಯವಾಗದ ರಾಜೀನಾಮೆ ನೀಡಬೇಕಾಯಿತು. ಹಾಗಾಗಿ ಸಮ್ಮಿಶ್ರ ಸರ್ಕಾರದ ಅವಧಿಯೂ ಪೂರ್ಣಗೊಳ್ಳಲಿಲ್ಲ.

ಇದೀಗ ಎರಡನೇ ಬಾರಿ ಕಳೆದ 2018ರ ಮೇ 23ರಂದು ಜೆಡಿಎಸ್ ಮತ್ತು ಕಾಂಗ್ರೆಸ್ ನೇತೃತ್ವದ ಸಮ್ಮಿಶ್ರ ಸರ್ಕಾರದ ಮುಖ್ಯಮಂತ್ರಿಯಾಗಿ ಕುಮಾರಸ್ವಾಮಿ ಅವರು ಅಧಿಕಾರ ಸ್ವೀಕರಿಸಿದರೂ ಕೇವಲ 14 ತಿಂಗಳಲ್ಲೇ ಅಧಿಕಾರದಿಂದ ಕೆಳಗಿಳಿಯಬೇಕಾಯಿತು.